ಜೆಎಸ್‌ಎಸ್ ಮಹಾವಿದ್ಯಾಪೀಠ

## ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

ಊಟಿರಸ್ತೆ, ಮೈಸೂರು-೫೭೦ ೦೨೫

ESTD - 1964

☎ 0821-2548236 & 2548380 Fax: 0821-2548238 E-mail: jssautonomous@gmail.com

ಸಂಖ್ಯೆ: ಜೆಎಸ್‌ಎಸ್‌ಸಿಎಂ/ ದಿನಾಂಕ: 14.08.2013

## ಪ್ರಕಟಣೆಯ ಕೃಪೆಗಾಗಿ

ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಪದವಿ ಹಾಗೂ ಪದವಿಪೂರ್ವ ಕಾಲೇಜುಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ 2013-14 ನೇ ಸಾಲಿನ ವಾರ್ಷಿಕ ಕ್ರೀಡಾಕೂಟವನ್ನು ದಿನಾಂಕ: 14-08-2013 ರಂದು ಹಮ್ಮಿಕೊಳ್ಳಲಾಗಿದ್ದ ಈ ಕ್ರೀಡಾಕೂಟವನ್ನು ಮಹೇಂದ್ರರಾವ್ ಜೆ, ರಾಷ್ಟ್ರೀಯ ಅಥ್ಲೆಟಿಕ್ ಕ್ರೀಡಾಪಟು, ಭಾರತೀಯ ಜೀವ ವಿಮಾ ನಿಗಮ, ಮೈಸೂರು ಇವರು ಬಲೂನ್‌ಗಳನ್ನು ಹಾರಿಬಿಡುವ ಮೂಲಕ ಉದ್ಘಾಟಿಸಿದರು. ನಂತರ ಮಾತನಾಡಿ ವಿದ್ಯಾರ್ಥಿಗಳು ಅಧ್ಯಯನದ ಜೊತೆ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರ ಮೂಲಕ ತಮ್ಮ ಸಂಪೂರ್ಣ ವ್ಯಕ್ತಿತ್ವ ರೂಪಿಸಿಕೊಳ್ಳಬೇಕೆಂದು ತಿಳಿಸಿದರು. ವಿದ್ಯಾರ್ಥಿಗಳು ಉನ್ನತಿ ಸಾಧಿಸಬೇಕಾದರೆ ಪರಿಶ್ರಮ ಬಹಳ ಮುಖ್ಯ, ಆದ್ದರಿಂದ ನಿರ್ದಿಷ್ಟ ಚಟುವಟಿಕೆಯಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಳ್ಳುವ ಮೂಲಕ ಉನ್ನತಿ ಸಾಧಿಸಿ ಎಂದು ಕರೆ ಕೊಟ್ಟರು. ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ. ಬಿ.ಡಿ. ಸುಬ್ಬಣ್ಣ ನವರು ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಪಠ್ಯಕ್ರಮದ ಜೊತೆಗೆ ಪಠ್ಯೇತರ ಚಟುವಟಿಕೆಗಳು ಅತಿಮುಖ್ಯ. ಪಠ್ಯೇತರ ಚಟುವಟಿಕೆಗಳು ಅದರಲ್ಲೂ ಮುಖ್ಯವಾಗಿ ಕ್ರೀಡಾ ಚಟುವಟಿಕೆಗಳು ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಸಹಕಾರಿಯಾಗುತ್ತದೆ ಎಂದು ತಿಳಿಸಿದರು. ಪ್ರೊ. ಬಿ.ವಿ. ಸಾಂಬಶಿವಯ್ಯನವರು ಸ್ವಾಗತಿಸಿದರು. ಕೊನೆಯಲ್ಲಿ ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ ಎಂ.ಎಸ್. ವೆಂಕಟರಾವ್ ಎಲ್ಲರನ್ನೂ ವಂದಿಸಿದರು. ಸಮಾರಂಭದಲ್ಲಿ ಪದವಿ ವಿಭಾಗದ ಶೈಕ್ಷಣಿಕ ಡೀನ್ ಪ್ರೊ. ಎಂ.ಬಿ. ಮಲ್ಲಿಕಾರ್ಜುನ ಪಂಡಿತ್, ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರಾದ ಶ್ರೀ. ಎಸ್. ಸೋಮಶೇಖರ್ ಉಪಸ್ಥಿತರಿದ್ದರು. ಪ್ರಾರಂಭದಲ್ಲಿ ಕು. ಸಿಂಚನಾ, ದ್ವಿತೀಯ ಬಿ ಎಸ್ಸಿ ಪ್ರಾರ್ಥಿಸಿದರು, ಭೌತಶಾಸ್ತ್ರ ವಿಭಾಗದ ಶ್ರೀ ಎಲ್. ವಿನಯ್‌ಕುಮಾರ್ ಕಾರ್ಯಕ್ರಮವನ್ನು ನಿರೂಪಿಸಿದರು.

(ಪ್ರೊ. ಬಿ.ವಿ. ಸಾಂಬಶಿವಯ್ಯ)
ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570 025.

ಗೆ

ಸಂಪಾದಕರು / ವರದಿಗಾರರು

\- - - - - - - - - - - - - - - -

\- - - - - - - - - - - - - - - -